ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಬ್ಯಾ.ವಿ/ತಾಂ.ಮ/ 410 /2013–14

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ ವಿಭಾಗ,
ಬೃ.ಬೆಂ.ಮ.ಪಾ.ಬೆಂಗಳೂರು–92.
ದಿನಾಂಕ:

ತಾಂತ್ರಿಕ ಮಂಜೂರಾತಿ

ವಿಷಯ:– **Improvements to Roads and Drains at Krishna North Villas I in Ward No.10.**

ಉಲ್ಲೇಖ:– 1) ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ, ಕಾಮಗಾರಿ ಸಂಕೇತ:

2) ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ./ಜಂ.ಅ/ ಆ.ಅ/647/ 13–14, ದಿನಾಂಕ:23.12.2013.

3) ಈ ಹಿಂದೆ ನೀಡಲಾಗಿರುವ ತಾಂತ್ರಿಕ ಮಂಜೂರಾತಿ ಸಂಖ್ಯೆ:ಬೃ.ಬೆಂ.ಮ.ಪಾ/ಅ.ಅ/ಯ.ವ/ತಾಂ.ಮ/ /2013–14,ದಿನಾಂಕ:23.12.2013

4) ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ವಿಷಯದ ಸಂಖ್ಯೆ:ವಾಕಾಸ್ಥಾಸ/232/13–14 ದಿ:

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ,ಸಹಾಯಕ ಕಾರ್ಯಪಾಲಕ ಅಭಿಯಂತರರು ("ವಿದ್ಯಾರಣ್ಯಪುರ ಉಪ ವಿಭಾಗ) ರವರು **2013–14ನೇ** ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ. 15.00** ಲಕ್ಷಗಳ ಅಂದಾಜು ಪಟ್ಟಿಗೆ ಪಿ–2654 ಅನುಧಾನದಡಿ ತಾಂತ್ರಿಕ ಮಂಜೂರಾತಿಗಾಗಿ ನೀಡಲಾಗಿರುತ್ತದೆ. ಆದರೆ ಕಂಡಿಕೆ (4)ರಂತೆ ಸದರಿ ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್ ಮುಖಾಂತರ ನಿರ್ವಹಿಸಲು ಅನುಮೋದನೆಯಾಗಿದ್ದು, ಸದರಿ ಅಂದಾಜು ಪಟ್ಟಿಯಲ್ಲಿ ಕೆ.ಆರ್.ಐ.ಡಿ.ಎಲ್ ನಿಗದಿ ಪಡಿಸಿರುವ ಮೊತ್ತವನ್ನು ಸೇರಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ತಾಂತ್ರಿಕ ಮಂಜೂರಾತಿ ಕೋರಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12 ದಿನಾಂಕ:21–07–2013ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 134 ಕ್ರ.ಸಂ 410 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.ಹಾಗೂ ಈ ಹಿಂದೆ ಉಲ್ಲೇಖ(3)ರಲ್ಲಿ ನೀಡಲಾಗಿರುವ ತಾಂತ್ರಿಕ ಮಂಜೂರಾತಿಯನ್ನು ರದ್ದುಪಡಿಸಲಾಗಿರುತ್ತದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ, ಬೆಂಗಳೂರು–92.

Superintending Engineer
Yelahanka Zone
BBMP Bangalore

ಪ್ರತಿಯನ್ನು:

1. ಮಾನ್ಯ ಅಪರ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.